# All India Radio: Bangalore
# National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

20.02.2025 19.35 P.M.

**************

ಮುಖ್ಯಾಂಶಗಳು

- ಪ್ರಧಾನಮಂತ್ರಿ ಇಂಟರ್ನ್‌ಶಿಪ್ ಯೋಜನೆಯ ಎರಡನೇ ಸುತ್ತಿಗೆ ಅರ್ಜಿ ಆಹ್ವಾನ; ಉನ್ನತ ಸಂಸ್ಥೆಗಳಲ್ಲಿ ತರಬೇತಿಗೆ ಅವಕಾಶ
- ೧೪೯ ರಕ್ಷಣಾ ರೇಡಿಯೊ ಖರೀದಿಗೆ ಭಾರತೀಯ ಕರಾವಳಿ ಕಾವಲು ಪಡೆ-ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ನಡುವೆ ಒಪ್ಪಂದ
- ಸಾಂಕ್ರಾಮಿಕವಲ್ಲದ ರೋಗಗಳ ಆರೋಗ್ಯ ತಪಾಸಣಾ ಅಭಿಯಾನಕ್ಕೆ ಕೇಂದ್ರ ಸರ್ಕಾರ ಚಾಲನೆ
- ದೆಹಲಿ ಅಭಿವೃದ್ಧಿಗೆ ಬದ್ಧ; ನೂತನ ಮುಖ್ಯಮಂತ್ರಿ ರೇಖಾ ಗುಪ್ತಾ
- ಐಸಿಸಿ ಕ್ರಿಕೆಟ್ ಚಾಂಪಿಯನ್ಸ್ ಟ್ರೋಫಿ: ಭಾರತಕ್ಕೆ ೨೨೯ ರನ್ ಗೆಲುವಿನ ಗುರಿ ನೀಡಿದ ಬಾಂಗ್ಲಾ ತಂಡ

***************

ಪ್ರಧಾನಮಂತ್ರಿ ಇಂಟರ್ನ್‌ಶಿಪ್ ಯೋಜನೆ-ಪಿ.ಎಂ.ಐ.ಎಸ್ ಪೈಲಟ್ ಹಂತದ ಎರಡನೇ ಸುತ್ತು ಆರಂಭಗೊಂಡು, ಮತ್ತೊಮ್ಮೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಮೊದಲ ಸುತ್ತಿನಲ್ಲಿ ಆರು ಲಕ್ಷಕ್ಕೂ ಹೆಚ್ಚು ಅರ್ಜಿಗಳು ಬಂದ ನಂತರ, ಎರಡನೇ ಸುತ್ತಿನಲ್ಲಿ ದೇಶಾದ್ಯಂತದ ಉನ್ನತ ಕಂಪನಿಗಳಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಇಂಟರ್ನ್‌ಶಿಪ್ ಅವಕಾಶಗಳನ್ನು ನೀಡಲಾಗುತ್ತದೆ.

ತೈಲ, ಅನಿಲ ಮತ್ತು ಇಂಧನ, ಬ್ಯಾಂಕಿಂಗ್ ಮತ್ತು ಹಣಕಾಸು ಸೇವೆಗಳು, ಪ್ರಯಾಣ, ಆಟೋಮೋಟಿವ್ ಸೇರಿದಂತೆ ಅನೇಕ ವಲಯಗಳಲ್ಲಿ ೩೦೦ ಕ್ಕೂ ಹೆಚ್ಚು ಕಂಪನಿಗಳು ಯುವಜನತೆಗೆ ತಮ್ಮ ಉದ್ಯೋಗ ಸಾಮರ್ಥ್ಯವನ್ನು ಹೆಚ್ಚಿಸಲು ಇಂಟರ್ನ್‌ಶಿಪ್ ಅವಕಾಶಗಳನ್ನು ನೀಡಿವೆ ಎಂದು ಕಾರ್ಪೊರೇಟ್ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

ಎರಡನೇ ಸುತ್ತಿನಲ್ಲಿ, ಪ್ರತಿಯೊಬ್ಬ ಅರ್ಜಿದಾರರು ಮೂರು ಇಂಟರ್ನ್‌ಶಿಪ್ ಅರ್ಜಿಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಪ್ರಧಾನ ಮಂತ್ರಿ ಇಂಟರ್ನ್‌ಶಿಪ್ ಯೋಜನೆಯನ್ನು ದೇಶದ ಯುವ ಜನಸಂಖ್ಯೆಯ ಸಾಮರ್ಥ್ಯವನ್ನು ಸಮರ್ಥವಾಗಿ ಬಳಸಿಕೊಳ್ಳಲು ವಿನ್ಯಾಸಗೊಳಿಸಲಾಗಿದೆ. ಅವರಿಗೆ ಉನ್ನತ ಕಂಪನಿಗಳಲ್ಲಿ ೧೨ ತಿಂಗಳ ಸಂಬಳದ ಇಂಟರ್ನ್‌ಶಿಪ್‌ಗಳನ್ನು ಒದಗಿಸಲಾಗುತ್ತದೆ.

ಈ ಯೋಜನೆಯು ಪ್ರಸ್ತುತ ಯಾವುದೇ ಪೂರ್ಣ ಸಮಯದ ಶೈಕ್ಷಣಿಕ ಕಾರ್ಯಕ್ರಮ ಅಥವಾ ಉದ್ಯೋಗದಲ್ಲಿ ದಾಖಲಾಗದ ೨೧ ರಿಂದ ೨೪ ವರ್ಷ ವಯೋಮಾನದವರನ್ನು ಗುರಿಯಾಗಿರಿಸಿಕೊಂಡಿದೆ. ಪ್ರತಿಯೊಬ್ಬ ಇಂಟರ್ನ್‌ಗೆ ಮಾಸಿಕ ಐದು ಸಾವಿರ ರೂಪಾಯಿಗಳ ಆರ್ಥಿಕ ಸಹಾಯವನ್ನು ನೀಡಲಾಗುವುದರ ಜೊತೆಗೆ ಆರು ಸಾವಿರ ರೂಪಾಯಿಗಳ ಒಂದು ಬಾರಿಯ ಆರ್ಥಿಕ ಸಹಾಯವನ್ನು ನೀಡಲಾಗುತ್ತದೆ.

***************

ಭಾರತೀಯ ಕರಾವಳಿ ಕಾವಲು ಪಡೆಗಾಗಿ ೧೪೯ ಸಾಫ್ಟ್‌ವೇರ್ ರಕ್ಷಣಾ ರೇಡಿಯೊಗಳನ್ನು ಖರೀದಿಸಲು ಮಾಡಲು ರಕ್ಷಣಾ ಸಚಿವಾಲಯ ಇಂದು ನವದೆಹಲಿಯಲ್ಲಿ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್-ಬಿ.ಇ.ಎಲ್ ಜೊತೆಗೆ ಒಂದು ಸಾವಿರದ ೨೨೦ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಒಪ್ಪಂದಕ್ಕೆ ಸಹಿ ಹಾಕಿದೆ.

ಈ ಅತ್ಯಾಧುನಿಕ ರೇಡಿಯೊಗಳು ಹೆಚ್ಚಿನ ವೇಗದ ಡೇಟಾ ಮತ್ತು ಸಂರಕ್ಷಿತ ಧ್ವನಿ ಸಂವಹನದ ಮೂಲಕ ಸುರಕ್ಷಿತ ಮತ್ತು ವಿಶ್ವಾಸಾರ್ಹ ಮಾಹಿತಿ ಹಂಚಿಕೆ, ರಕ್ಷಣಾ ಸಹಯೋಗ ಮತ್ತು ಸನ್ನಿವೇಶದ ಅರಿವನ್ನು ಸಕ್ರಿಯಗೊಳಿಸುತ್ತವೆ ಎಂದು ಸಚಿವಾಲಯ ಹೇಳಿದೆ.

ಆತ್ಮನಿರ್ಭರ ಭಾರತ್ ಉಪಕ್ರಮದೊಂದಿಗೆ ಹೊಂದಾಣಿಕೆಯಾಗುವ ಈ ಒಪ್ಪಂದವು ಸುಧಾರಿತ ಮಿಲಿಟರಿ-ದರ್ಜೆಯ ಸಂವಹನ ವ್ಯವಸ್ಥೆಗಳಿಗೆ ದೇಶದ ಉತ್ಪಾದನಾ ಸಾಮರ್ಥ್ಯಗಳನ್ನು ಹೆಚ್ಚಿಸುವುದು, ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು ಮತ್ತು ಅಭಿವೃದ್ಧಿಗೊಳಿಸುವ ಗುರಿಯನ್ನು ಹೊಂದಿದೆ.

***************

ದೇಶಾದ್ಯಂತ ಮೂವತ್ತು ಹಾಗೂ ಅದಕ್ಕಿಂತ ಹೆಚ್ಚು ವಯೋಮಾನದವರ ಸಾಂಕ್ರಾಮಿಕವಲ್ಲದ ರೋಗಗಳ ಆರೋಗ್ಯ ತಪಾಸಣಾ ಅಭಿಯಾನಕ್ಕೆ ಕೇಂದ್ರ ಸರ್ಕಾರ ಚಾಲನೆ ನೀಡಿದೆ.

ಪ್ರತಿಯೊಬ್ಬರ ಆರೋಗ್ಯವನ್ನು ಶೇಕಡ ನೂರರಷ್ಟು ಖಾತ್ರಿಪಡಿಸಲು ಈ ಅಭಿಯಾನ ಆರಂಭಿಸಲಾಗಿದೆ. ಮಧುಮೇಹ, ಅಧಿಕ ರಕ್ತದೊತ್ತಡ ಮತ್ತು ಬಾಯಿ, ಸ್ತನ ಮತ್ತು ಗರ್ಭಕಂಠ ಕ್ಯಾನ್ಸರ್ ಸೇರಿದಂತೆ ಪ್ರಚಲಿತದಲ್ಲಿರುವ ಸಾಂಕ್ರಾಮಿಕವಲ್ಲದ ಕಾಯಿಲೆಗಳ ಬಗ್ಗೆ ಪ್ರತಿಯೊಬ್ಬರ ಆರೋಗ್ಯ ತಪಾಸಣೆಯ ಗುರಿ ಈ ಉಪಕ್ರಮದ್ದಾಗಿದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ. ಸಾಂಕ್ರಾಮಿಕವಲ್ಲದ ರೋಗಗಳನ್ನು ಮೊದಲೇ ಪತ್ತೆ ಮಾಡುವುದು ಇದರ ಮುಖ್ಯ ಉದ್ದೇಶವಾಗಿದೆ.

ಇಂದಿನಿಂದ ಮಾರ್ಚ ೩೧ರವರೆಗೆ ಈ ಅಭಿಯಾನ ಮುಂದುವರೆಯಲಿದೆ. ಆಶಾ ಕಾರ್ಯಕರ್ತೆಯರು, ದಾದಿಯರು ಮನೆಮನೆಗೆ ಭೇಟಿ ನೀಡಿ ಆರೋಗ್ಯ ತಪಾಸಣೆ ನಡೆಸಲಿದ್ದಾರೆ.

***************

ಮುಂಬೈನ ಪೊವೈನಲ್ಲಿ ಇಂದು 'ಗ್ರೀನ್ ಶಿಪ್ಪಿಂಗ್ ಕಾನ್ಕ್ಲೇವ್ ೨೦೨೫' ಉದ್ಘಾಟಿಸಲಾಯಿತು.

ಈ ಕಾರ್ಯಕ್ರಮದಲ್ಲಿ, ಕೇಂದ್ರ ಬಂದರುಗಳು, ಹಡಗು ಮತ್ತು ಜಲಮಾರ್ಗಗಳ ಖಾತೆ ರಾಜ್ಯ ಸಚಿವ ಶಾಂತನು ಠಾಕೂರ್ ಮತ್ತು ಅಂತಾರಾಷ್ಟ್ರೀಯ ಸಾಗರ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆರ್ಸೆನಿಯೊ ಡೊಮಿಂಗ್ಯೂಜ್ ಭಾಗವಹಿಸಿದ್ದರು.

ಆಕಾಶವಾಣಿಯೊಂದಿಗೆ ಮಾತನಾಡಿದ ಸಚಿವ ಠಾಕೂರ್, ಗ್ರೀನ್ ಶಿಪ್ಪಿಂಗ್ ಕಾನ್ಕ್ಲೇವ್ ಭಾರತದ ಒಂದು ಉತ್ತಮ ಉಪಕ್ರಮವಾಗಿದೆ ಎಂದರು. ಜಾಗತಿಕವಾಗಿ ಇಂಗಾಲ ಹೊರಸೂಸುವಿಕೆ ಮತ್ತು ಮಾಲಿನ್ಯ ಹೆಚ್ಚಾಗಿದೆ. ಇದರಿಂದ ನಮ್ಮನ್ನು ನಾವು ರಕ್ಷಿಸಿಕೊಳ್ಳಲು ಇಂತಹ ಉಪಕ್ರಮಗಳನ್ನು ಕೈಗೊಳ್ಳುವ ಅಗತ್ಯವಿದೆ ಎಂದು ಅವರು ಹೇಳಿದರು.

ಅಂತಾರಾಷ್ಟ್ರೀಯ ಸಾಗರ ಸಂಸ್ಥೆಯ (|ಒಔ) ಪ್ರಧಾನ ಕಾರ್ಯದರ್ಶಿ ಆರ್ಸೆನಿಯೊ ಡೊಮಿಂಗ್ಯೂಜ್, ಯುವ ಪೀಳಿಗೆಯಿಂದ ಬಹಳಷ್ಟು ನಿರೀಕ್ಷೆಗಳಿವೆ ಎಂದರು. ಹಡಗು ವಲಯವು ಮಹತ್ವಾಕಾಂಕ್ಷೆಯ

ಗುರಿಗಳನ್ನು ಸಾಧಿಸುತ್ತಿದ್ದು, ಈ ವಲಯದಲ್ಲಿ ವಿವಿಧ ಉತ್ತಮ ಉಪಕ್ರಮಗಳಿಗಾಗಿ ನಿರಂತರವಾಗಿ ಧ್ವನಿ ಎತ್ತುವುದು ಅಗತ್ಯವಾಗಿದೆ ಎಂದು ಹೇಳಿದರು.

***************

ಭೂತಾನ್ ಪ್ರಧಾನಿ ತ್ಶೆರಿಂಗ್ ಟೋಬ್ಗೆ ಮೂರು ದಿನಗಳ ಭಾರತ ಭೇಟಿಗಾಗಿ ಇಂದು ಮಧ್ಯಾಹ್ನ ನವದೆಹಲಿಗೆ ಆಗಮಿಸಿದರು.

ಪ್ರಧಾನಿ ತ್ಶೆರಿಂಗ್ ಟೋಬ್ಗೆ ತಮ್ಮ ಭೇಟಿಯ ಸಮಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಸಭೆ ನಡೆಸಲಿದ್ದಾರೆ. ನಾಳೆ ಅವರು ಪ್ರಮುಖ ಭಾಷಣಕಾರರಾಗಿ ಸೋಲ್ ಲೀಡರ್‌ಶಿಪ್ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ.

ಈ ಭೇಟಿಯು ಭಾರತ ಮತ್ತು ಭೂತಾನ್ ನಡುವಿನ ಸ್ನೇಹ ಮತ್ತು ಸಹಕಾರದ ವಿಶಿಷ್ಟ ಹಾಗೂ ಶಾಶ್ವತ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

***************

ಮುಖ್ಯ ಆರ್ಥಿಕ ಸಲಹೆಗಾರ ಡಾ. ವಿ. ಅನಂತ ನಾಗೇಶ್ವರನ್ ಅವರ ಅಧಿಕಾರಾವಧಿಯನ್ನು ಮಾರ್ಚ್ ೨೦೨೭ ರವರೆಗೆ ಎರಡು ವರ್ಷಗಳ ಕಾಲ ವಿಸ್ತರಿಸಲಾಗಿದೆ.

ಈ ಸಂಬಂಧ ಹಣಕಾಸು ಸಚಿವಾಲಯ ಇಂದು ಆದೇಶ ಹೊರಡಿಸಿದೆ. ಡಾ. ವಿ. ಅನಂತ ನಾಗೇಶ್ವರನ್ ಅವರು ಜನವರಿ ೨೦೨೨ ರಲ್ಲಿ ಮುಖ್ಯ ಆರ್ಥಿಕ ಸಲಹೆಗಾರರಾಗಿ ಅಧಿಕಾರ ವಹಿಸಿಕೊಂಡಿದ್ದರು.

***************

ದೆಹಲಿ ಮುಖ್ಯಮಂತ್ರಿಯಾಗಿ ರೇಖಾ ಗುಪ್ತಾ ಅವರು ಇಂದು ದೆಹಲಿ ಸಚಿವಾಲಯದಲ್ಲಿ ಅಧಿಕಾರ ವಹಿಸಿಕೊಂಡರು. ಅವರನ್ನು ಮುಖ್ಯ ಕಾರ್ಯದರ್ಶಿ ಧರ್ಮೇಂದ್ರ ಕುಮಾರ್ ಮತ್ತು ಇತರ ಹಿರಿಯ ಅಧಿಕಾರಿಗಳು ಸ್ವಾಗತಿಸಿದರು.

ದೆಹಲಿಯ ರಾಮಲೀಲಾ ಮೈದಾನದಲ್ಲಿ ಪ್ರಮಾಣ ವಚನ ಸ್ವೀಕರಿಸಿದ ರೇಖಾ ಗುಪ್ತಾ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಅವರು, ರೇಖಾ ಗುಪ್ತಾ ಅವರು ತಳಮಟ್ಟದಿಂದ ಬೆಳೆದು ಬಂದಿದ್ದು, ಕ್ಯಾಂಪಸ್ ರಾಜಕೀಯ, ಪುರಸಭೆ ಆಡಳಿತದಲ್ಲಿ ಸಕ್ರಿಯರಾಗಿದ್ದರು. ಈಗ ಅವರು ಮುಖ್ಯಮಂತ್ರಿಯಾಗಿದ್ದಾರೆ. ದೆಹಲಿಯ ಅಭಿವೃದ್ಧಿಗಾಗಿ ಅವರು ಬಹಳ ಹುರುಪಿನಿಂದ ಕೆಲಸ ಮಾಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ರಾಷ್ಟ್ರ ರಾಜಧಾನಿಯ ಸಂಸದರು ಮತ್ತು ಶಾಸಕರು ಗುಪ್ತಾ ಅವರನ್ನು ಭೇಟಿ ಮಾಡಿ ಅಭಿನಂದಿಸಿದರು.

ಅಧಿಕಾರ ವಹಿಸಿಕೊಂಡ ನಂತರ, ಮುಖ್ಯಮಂತ್ರಿ ರೇಖಾ ಗುಪ್ತಾ ಅವರು 'ವಿಕಸಿತ ದೆಹಲಿ' ಅಭಿಯಾನಕ್ಕೆ ಬದ್ಧತೆಯನ್ನು ಪುನರುಚ್ಚರಿಸಿದ್ದಾರೆ. 'ವಿಕಸಿತ ದೆಹಲಿ' ಅಭಿಯಾನವನ್ನು ತ್ವರಿತವಾಗಿ ಪ್ರಾರಂಭಿಸುವ ಭರವಸೆ ನೀಡಿದ ಅವರು, ಚುನಾವಣೆಗೆ ಮೊದಲು ಬಿಜೆಪಿ ನೀಡಿದ ಪ್ರತಿಯೊಂದು ಭರವಸೆಗಳನ್ನು ಈಡೇರಿಸುವುದಾಗಿ ಗುರುವಾರ ನಾಗರಿಕರಿಗೆ ತಿಳಿಸಿದರು.

ಧ್ವನಿ : ರೇಖಾ ಗುಪ್ತಾ

***************

ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಎನ್.ಡಿ.ಎ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳ ಸಭೆ, ಇಂದು ನವದೆಹಲಿಯಲ್ಲಿ ನಡೆಯಿತು.

ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್ ಮತ್ತು ಜೆಪಿ ನಡ್ಡಾ ಸಭೆಯಲ್ಲಿ ಭಾಗವಹಿಸಿದ್ದರು. ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಮತ್ತು ಉಪಮುಖ್ಯಮಂತ್ರಿಗಳಾದ ಏಕನಾಥ್ ಶಿಂಧೆ ಮತ್ತು ಅಜಿತ್ ಪವಾರ್, ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಮತ್ತು ಉಪಮುಖ್ಯಮಂತ್ರಿ ಪವನ್ ಕಲ್ಯಾಣ್, ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ, ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್, ರಾಜಸ್ಥಾನ ಮುಖ್ಯಮಂತ್ರಿ ಭಜನ್ ಲಾಲ್ ಶರ್ಮಾ, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ಉತ್ತರ ಪ್ರದೇಶ ಉಪಮುಖ್ಯಮಂತ್ರಿ ಕೇಶವ್ ಪ್ರಸಾದ್ ಮೌರ್ಯ, ಬಿಹಾರ ಉಪಮುಖ್ಯಮಂತ್ರಿ ವಿಜಯ್ ಸಿನ್ಹಾ ಸಭೆಯಲ್ಲಿ ಭಾಗವಹಿಸಿದ್ದರು.

***************

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳವು ಕೇವಲ ಧಾರ್ಮಿಕ ಸಭೆಯಾಗಿ ಮಾತ್ರವಲ್ಲದೆ, ಸ್ವಚ್ಛತೆ ಮತ್ತು ಪರಿಸರ ಸಂರಕ್ಷಣೆಯೆಡೆಗೆ ಕೇಂದ್ರೀಕರಿಸಿದ ಬೃಹತ್ ಆಂದೋಲನವಾಗಿ ಮಾರ್ಪಟ್ಟಿದೆ.

ಮೇಳದಲ್ಲಿನ ನವಾಮಿ ಗಂಗೆ ಮಂಟಪವು, ಗಂಗಾ ನದಿಯ ಸ್ವಚ್ಛತೆ ಮತ್ತು ಸಂರಕ್ಷಣೆಯ ಮಹತ್ವದ ಬಗ್ಗೆ ಅರಿವು ಮೂಡಿಸುವ ವಿಶಿಷ್ಟ ವೇದಿಕೆಯಾಗಿದೆ.

ಈ ಬೃಹತ್ ಮೇಳದಲ್ಲಿ, ನದಿಯ ಸ್ವಚ್ಛತೆ ಖಚಿತಪಡಿಸಿಕೊಂಡು, ಅದರ ಪಾವಿತ್ರ್ಯತೆ ಕಾಪಾಡಿಕೊಳ್ಳುವ ಸಲುವಾಗಿ ನವಾಮಿ ಗಂಗೆ ಆಂದೋಲನವು ೧೦ ಒಳಚರಂಡಿ ಸಂಸ್ಕರಣಾ ಘಟಕಗಳನ್ನು ಸಕ್ರಿಯಗೊಳಿಸುವಲ್ಲಿ ಯಶಸ್ವಿಯಾಗಿದೆ ಎಂದು ಪ್ರಯಾಗರಾಜ್‌ನಿಂದ ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

***************

ಭಾರತದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಇಂದು ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿದರು.

ನವದೆಹಲಿಯ ನಿರ್ವಚನ ಸದನದಲ್ಲಿ ನೂತನ ಮುಖ್ಯ ಚುನಾವಣಾ ಆಯುಕ್ತರಾಗಿ ಜ್ಞಾನೇಶ್ ಕುಮಾರ್ ನಿನ್ನೆ ಅಧಿಕಾರ ವಹಿಸಿಕೊಂಡರು.

ನಿರ್ಗಮಿತ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ನಂತರ ಅಧಿಕಾರ ವಹಿಸಿಕೊಂಡ ಜ್ಞಾನೇಶ್ ಕುಮಾರ್, ಜನರಿಗೆ ನೀಡಿದ ಸಂದೇಶದಲ್ಲಿ, ರಾಷ್ಟ್ರ ನಿರ್ಮಾಣದ ಮೊದಲ ಹೆಜ್ಜೆ ಮತದಾನವಾಗಿದ್ದು, ೧೮ ವರ್ಷ ಪೂರ್ಣಗೊಳಿಸಿದ ಭಾರತದ ಪ್ರತಿಯೊಬ್ಬ ನಾಗರಿಕರು ಜಾಗೃತ ಮತದಾರರಾಗಬೇಕು ಮತ್ತು ತಪ್ಪದೇ ಮತ ಚಲಾಯಿಸಬೇಕು. ಭಾರತದ ಸಂವಿಧಾನ, ಚುನಾವಣಾ ಕಾನೂನುಗಳು, ನಿಯಮಗಳು ಮತ್ತು ಸೂಚನೆಗಳ ಪ್ರಕಾರ, ಚುನಾವಣಾ ಆಯೋಗವು ಮತದಾರರೊಂದಿಗೆ ಇತ್ತು, ಇದೆ ಮತ್ತು ಯಾವಾಗಲೂ ಇರುತ್ತದೆ ಎಂದು ಹೇಳಿದರು.

***************

ಮಹಾರಾಷ್ಟ್ರದ ಬುಲ್ಢಾನಾ ಜಿಲ್ಲೆಯ ಸಮೃದ್ಧಿ ಹೆದ್ದಾರಿಯಲ್ಲಿರುವ ದುಸಾರ್ಬಿಡ್ ಟೋಲ್ ಪ್ಲಾಜಾ ಬಳಿ ಇಂದು ಬೆಳಿಗ್ಗೆ ನಡೆದ ರಸ್ತೆ ಅಪಘಾತದಲ್ಲಿ ಇಬ್ಬರು ಸಾವನ್ನಪ್ಪಿದ್ದು, ಒಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಮುಂಬೈನಿಂದ ಅಕೋಲಾಗೆ ತೆರಳುತ್ತಿದ್ದ ವಾಹನವೊಂದು ನಿಯಂತ್ರಣ ತಪ್ಪಿ ರಸ್ತೆ-ಮಧ್ಯದ ತಡೆಗೋಡೆಗೆ ಡಿಕ್ಕಿ ಹೊಡೆದ ಪರಿಣಾಮ ಕಾರು ಅಪಘಾತ ಸಂಭವಿಸಿದೆ.

ಮುಂಬೈನ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಮುಂಬೈನವರೇ ಆಗಿರುವ ಚಾಲಕ ಗಂಭೀರ ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

***************

ದುಬೈನ ಅಂತರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿಯ ತನ್ನ ಮೊದಲ ಗ್ರೂಪ್ ಎ ಪಂದ್ಯದಲ್ಲಿ ಬಾಂಗ್ಲಾದೇಶ ತಂಡವು, ಭಾರತ ತಂಡಕ್ಕೆ ಗೆಲ್ಲಲು ೨೨೯ ರನ್‌ಗಳ ಗುರಿ ನೀಡಿದೆ.

ಇತ್ತೀಚಿನ ವರದಿ ಬಂದಾಗ ಭಾರತ ತಂಡವು ೧೧.೫ ಓವರ್‌ಗಳಲ್ಲಿ, ೧ವಿಕೆಟ್‌ಗೆ ೭೧ ರನ್ ಗಳಿಸಿ ಮುನ್ನಡೆಯುತ್ತಿದೆ.

ಇದಕ್ಕೂ ಮೊದಲು, ಬಾಂಗ್ಲಾದೇಶ ಟಾಸ್ ಗೆದ್ದು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿತು.

********ಮುಕ್ತಾಯ*******